ಸಂಪುಟ : 10 ಸಂಚಿಕೆ: 229 ಪುಟ : 4+2 ಬೆಲೆ: 3.00 ಬುಧವಾರ ಅಕ್ಟೋಬರ್ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 229 Pages : 4+2 Price : 3.00 Wednesday October 22 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ದೀಪಾವಳಿ ಹಬ್ಬದ ಶುಭಾಶಯಗಳು

ಕತ್ತಲು ಕರಗುವಂತೆ ಕಷ್ಟ ಕರಗಲಿ, ದೀಪದ ಬೆಳಕಿನಂತೆ ಸಂತೋಷ ಬರಲಿ, ಜೀವನ ಆನಂದವಾಗಿರಲಿ.....
ಓದುಗರು, ಚಂದಾದಾರರು, ಜಾಹೀರಾತುದಾರರು, ಪತ್ರಿಕಾ ವಿತರಕರು ಹಾಗೂ ಹಿತೈಷಿಗಳಿಗೆ ದೀಪಾವಳಿ ಹಬ್ಬದ ಶುಭಾಶಯಗಳು

–ಸಂಪಾದಕರು

**ಬಿಡುವು**

ದೀಪಾವಳಿ ಪಾಡ್ಯ ನಿಮಿತ್ತ ನಮ್ಮ ಕಚೇರಿಗೆ ಬಿಡುವು ನೀಡಲಾಗಿದ್ದು, ನಾಳೆಯ ಸಂಚಿಕೆ ಪ್ರಕಟವಾಗುವುದಿಲ್ಲ.

–ವ್ಯವಸ್ಥಾಪಕರು.

ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ಮೂ ಗಂಗಾಧರ್ ಸಿ.ಎಮ್

# ಹುತಾತ್ಮ ಪೊಲೀಸರಿಗೆ ಗೌರವ ಸಲ್ಲಿಸೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಶಾಂತಿ ಮತ್ತು ಭದ್ರತೆಯ ಪಾಲನೆಯಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾಧರ್ ಸಿ.ಎಮ್ ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಮಂಗಳವಾರ ಗದಗ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಕರ್ತವ್ಯ ಪಾಲನೆಯಲ್ಲಿ ಪ್ರಾಣಾರ್ಪಣೆ ಮಾಡಿದ ಪೊಲೀಸರ ನೆನಪಿಗಾಗಿ ಏರ್ಪಡಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾಜಕ್ಕೆ ಸೇವೆ ಸಲ್ಲಿಸುತ್ತಿರುವ ಪ್ರತಿಯೊಬ್ಬ ಪೊಲೀಸರಿಗೂ ಇಂದು ವಿಶೇಷ ದಿನವಾಗಿದೆ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ನಾಗರಿಕರ ರಕ್ಷಣೆಗೆ ತಮ್ಮ ಪ್ರಾಣವನ್ನೂ ಲೆಕ್ಕಿಸದೇ ಕರ್ತವ್ಯ ನಿರ್ವಹಿಸಿದ ಪೊಲೀಸರ ಬಲಿದಾನ ಹಾಗೂ ಶೌರ್ಯವನ್ನು ಸ್ಮರಿಸುವ ದಿನ ಇದಾಗಿದೆ. ಇಂತಹ




ಧೈರ್ಯವಂತ ಪೊಲೀಸರನ್ನು ಬೆಳೆಸಿದ ಕುಟುಂಬದವರ ಶಕ್ತಿ ಹಾಗೂ ಸಹನೆಯನ್ನು ನಾವು ಸ್ಮರಿಸುತ್ತೇವೆ. ಇವರ ಧೈರ್ಯ ಹಾಗೂ ಸಾಹಸಗಳು ಮುಂದಿನ ತಲೆಮಾರಿಗೆ ಸ್ಪೂರ್ತಿಯಾಗಲಿ. ಕರ್ತವ್ಯ ನಿರ್ವಹಣೆಯಲ್ಲಿ ಪ್ರಾಣಾರ್ಪಣೆ ಮಾಡಿದ ಪೊಲೀಸರ ಸ್ಮರಣೆ ಮಾಡಲು ಪೊಲೀಸ್ ಹುತಾತ್ಮ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಪ್ರಾಣಾರ್ಪಣೆ ಮಾಡಿದ ಪೊಲೀಸರಿಗೆ ಗೌರವ ಸಲ್ಲಿಸೋಣ ಎಂದರು.

> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಭಾರತ–ಚೀನಾ ಗಡಿಯಲ್ಲಿ 1959ರಲ್ಲಿ ನಡೆದ ದಾಳಿಯಲ್ಲಿ ದೇಶದ ಪೊಲೀಸರು ಹುತಾತ್ಮರಾದರು. ಇದರ ಸ್ಮರಣಾರ್ಥವಾಗಿ ಪೊಲೀಸ್ ಹುತಾತ್ಮ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಪೊಲೀಸ್ ಇಲಾಖೆಯ ಪ್ರತಿ ಹಂತದ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಗಲಿರುಳೆನ್ನದೇ ನಿರಂತರ ಕರ್ತವ್ಯ ನಿರ್ವಹಿಸುವ ಮೂಲಕ ಬಲಿಷ್ಠ ಹಾಗೂ ಶಾಂತಿಯುತ ಸಮಾಜ ನಿರ್ಮಾಣಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಇದರಿಂದ ಜನರು ನೆಮ್ಮದಿಯ ಜೀವನ ಸಾಗಿಸಲು ಸಾಧ್ಯವಾಗುತ್ತದೆ. ಕರ್ತವ್ಯ ನಿರ್ವಹಣೆಯಲ್ಲಿ ಪ್ರಾಣಾರ್ಪಣೆಗೈದ ಪೊಲೀಸರ ತ್ಯಾಗ, ಸಾಹಸ ಸ್ಮರಣೀಯವಾದದ್ದು ಎಂದರು.

ಹುತಾತ್ಮ ಪೊಲೀಸರಿಗೆ ಪುಷ್ಪಗುಚ್ಛ ಅರ್ಪಿಸುವ ಮೂಲಕ ಗೌರವ ಸಮರ್ಪಿಸಲಾಯಿತು. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ ಸಜ್ಜನರ, ಡಿವೈಎಸ್‌ಪಿಗಳು, ಸಿಪಿಐ, ವಿವಿಧ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಬಾಲ ನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ನೂತನ ಕಟ್ಟಡ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಸಾಮೂಹಿಕ ವಿವಾಹಗಳ ಮೇಲೆ ನಿಗಾ ಇರಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಾಮೂಹಿಕ ವಿವಾಹಗಳಲ್ಲಿ ನಡೆಯುವ ಬಾಲ್ಯವಿವಾಹ ತಡೆಗಟ್ಟಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಸೋಮವಾರ ಗದಗ ಗಾಂಧಿ ನಗರ (ಸೆಟ್ಲಮೆಂಟ್)ನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಬಾಲ ನ್ಯಾಯ ಮಂಡಳಿ ಮತ್ತು ಮಕ್ಕಳ ಕಲ್ಯಾಣ

▶▶ 3ನೇ ಪುಟಕ್ಕೆ

> ಮಕ್ಕಳ ಸಹಾಯವಾಣಿ ಸಂಖ್ಯೆ 1098ಗೆ ಯಾವ ಸಂದರ್ಭದಲ್ಲಿ ಮತ್ತು ಯಾವ ಉದ್ದೇಶಕ್ಕೆ ಕರೆ ಮಾಡಬೇಕು ಎಂಬ ಕುರಿತು ಹಾಗೂ ಬಾಲ ನ್ಯಾಯ ಮಂಡಳಿಯ ಕಾರ್ಯಗಳ ಬಗ್ಗೆ ಸಾರ್ವಜನಿಕರಿಗೆ ವ್ಯಾಪಕ ಜಾಗೃತಿ ಕೈಗೊಳ್ಳಬೇಕು ಎಂದ ಸಚಿವರು, ಬಾಲ ನ್ಯಾಯ ಮಂಡಳಿ ಆವರಣದಲ್ಲಿ ವಿಶಾಲವಾದ ಜಾಗವಿದ್ದು, ತೋಟಗಾರಿಕೆ ಇಲಾಖೆ ನೆರವಿನಿಂದ ಉದ್ಯಾನ ನಿರ್ಮಾಣ ಮಾಡಬೇಕು ಎಂದು ಸಲಹೆ ನೀಡಿದರು.






## ಜಪಾನ್‌ನ ಮೊದಲ ಮಹಿಳಾ ಪ್ರಧಾನಿಯಾಗಿ ಕಟ್ಟಾ ಸಂಪ್ರದಾಯವಾದಿ ಸನೆ ತಾಕೈಚಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಜಪಾನ್

ಕಟ್ಟಾ ಸಂಪ್ರದಾಯವಾದಿ ಸನೆ ತಾಕೈಚಿ ಅವರನ್ನು ದೇಶದ ಮೊದಲ ಮಹಿಳಾ ಪ್ರಧಾನಿಯಾಗಿ ಜಪಾನ್ ಆಯ್ಕೆ ಮಾಡಿದೆ.

ಹತ್ಯೆಗೀಡಾದ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಶಿಷ್ಯೆಯಾಗಿರುವ ತಾ-ಕೈಚಿ ಅವರು, ಮಂಗಳವಾರ (ಅ.21) ನಡೆದ ಚುನಾವಣೆಯಲ್ಲಿ 465 ಸ್ಥಾನಗಳ ಸಂಸತ್ತಿನ ಕೆಳಮನೆಯಲ್ಲಿ 237 ಮತಗಳನ್ನು ಪಡೆದು ಪ್ರಧಾನಿ ಹುದ್ದೆಯನ್ನು ಖಚಿತಪಡಿಸಿಕೊಂಡಿದ್ದಾರೆ.

ಸೋಮವಾರ (ಅ20) ತಾಕೈಚಿ ಅವರ ಲಿಬರಲ್ ಡೆಮಾಕ್ರಟಿಕ್ ಪಕ್ಷ (ಎಲ್‌ಡಿಪಿ) ಮತ್ತು ಇಶಿನ್ ಎಂದೂ ಕರೆಯಲ್ಪಡುವ ಬಲಪಂಥೀಯ ಜಪಾನ್ ಇನ್ನೋವೇಶನ್ ಪಾರ್ಟಿ (ಜೆಐಪಿ) ನಡುವಿನ ಕೊನೆಯ ಕ್ಷಣದ ಒಪ್ಪಂದ ಫಲ ಕೊಟ್ಟ ಕಾರಣ ತಾಕೈಚಿ ಗೆಲುವು ಸಾಧಿಸಿದ್ದಾರೆ. ಆದರೂ, ಅವರ ಸರ್ಕಾರದಲ್ಲಿ ಬಹುಮತಕ್ಕೆ ಇನ್ನೂ ಎರಡು ಸ್ಥಾನಗಳ ಕೊರತೆಯಿದ್ದು, ರಾಜಕೀಯ ಅಸ್ಥಿರತೆಯ ಅಪಾಯವಿದೆ ಎಂದು ವರದಿಗಳು ಹೇಳಿವೆ.

ಯುದ್ಧಾನಂತರದ ಇತಿಹಾಸದ ಬಹುಪಾಲು ಜಪಾನ್ ಅನ್ನು ಆಳಿದ ಎಲ್‌ಡಿಪಿ ಜುಲೈನಲ್ಲಿ ನಡೆದ ಚುನಾವಣೆಯಲ್ಲಿ ದೊಡ್ಡ ಮಟ್ಟದ ಸೋಲನುಭವಿಸಿತ್ತು. ನಂತರದ ಮೂರು ತಿಂಗಳ ರಾಜಕೀಯ ನಿರ್ವಾತ ಮತ್ತು ಜಗಳವನ್ನು ಕೊನೆಗೊಳಿಸಿದ ಶಿಗೇರು ಇಶಿಬಾ ಅವರ ಸ್ಥಾನಕ್ಕೆ ತಾಕೈಚಿ ಆಯ್ಕೆಯಾಗಿದ್ದಾರೆ.

ಪುರುಷ ಪ್ರಾಬಲ್ಯ ದೇಶದ ರಾಜಕೀಯದಲ್ಲಿ ತಾಕೈಚಿ ಅವರ ಗೆಲುವು ಒಂದು ಮಹತ್ವದ ಬೆಳವಣಿಗೆ ಎಂದು ಪರಿಗಣಿಸಲಾಗಿದೆ. ಆದರೆ, ಆಕೆಯ ನಾಯಕತ್ವದಿಂದ ವಲಸೆ ನೀತಿಗಳು ಮತ್ತು ಸಾಮಾಜಿಕ ವಿಷಯಗಳಲ್ಲಿ ಸಂಪ್ರದಾಯವಾದಿ ಅಥವಾ ಕಟ್ಟುನಿಟ್ಟಾದ ನಿಲುವುಗಳು (ಬಲಪಂಥೀಯ ಧೋರಣೆ) ಬಲವಾಗುವ ಸಾಧ್ಯತೆಯಿದೆ. ಮಹಿಳೆಯರ ಸಮಾನತೆ ಅಥವಾ ವಿವಿಧತೆಯನ್ನು (ಉದಾಹರಣೆಗೆ, ಜನಾಂಗೀಯ ಅಥವಾ ಸಾಮಾಜಿಕ ವೈವಿಧ್ಯತೆ) ಉತ್ತೇಜಿಸುವ ನಿರೀಕ್ಷೆಯಿಲ್ಲ.

ರಾಜಕೀಯ ನಾಯಕಿಯಾಗಿ, ಮಹಿಳೆಯರ ಸಾಮಾಜಿಕ, ಆರ್ಥಿಕ ಅಥವಾ ರಾಜಕೀಯ ಅಭಿವೃದ್ಧಿಗೆ ಸಂಬಂಧಿಸಿದ ನೀತಿಗಳು ಅಥವಾ ಕಾನೂನುಗಳನ್ನು ಜಾರಿಗೆ ತರುವುದನ್ನು ಸ್ವತಃ ತಾಕೈಚಿ ತಡೆ-ಯುತ್ತಿದ್ದಾರೆ ಎಂಬ ಆರೋಪವಿದೆ.

### ದೀಪಾವಳಿ ಹಬ್ಬದ ನಿಮಿತ್ತ ವಿಶೇಷ ಲೇಖನ

# ದೀಪಕ್ಕಿಲ್ಲ ಸಿರಿತನ-ಬಡತನದ ಹಂಗು

ಭಾರತಿಯರಿಗೆ ಹಬ್ಬವೆಂದರೆ ಬಲು ಹಿಗ್ಗು. ವರುಷದ ಬಹುತೇಕ ದಿನಗಳಲ್ಲಿ ಧಾರ್ಮಿಕ, ಸಮಾಜಿಕ, ಕೌಟುಂಬಿಕ, ಮತ್ತು ಜನಾಂಗೀಯ ಹಬ್ಬಗಳ ಆಚರಣೆಗಳನ್ನು ಬಡವ-ಬಲ್ಲಿದ, ಜಾತಿ-ಮತ, ಊರು-ಕೇರಿ, ಮನೆ-ಮಠ, ಹಳ್ಳಿ-ದಿಲ್ಲಿ, ಹಿರಿಯ-ಕಿರಿಯ ಎನ್ನದೆ ಬಹಳ ಸಂಭ್ರಮದಿಂದ ಆಚರಣೆ ಮಾಡುವದನ್ನು ನೋಡಬಹುದಾಗಿದೆ.

ಜನಪದ ಸಂಸ್ಕೃತಿಯ ಪರಂಪರೆಯಲ್ಲಿ ಮೂಡಿಬರುವ ಹಬ್ಬಗಳು ಮತ್ತಷ್ಟು ಮಹೋನ್ನತೆಯನ್ನು ಹೊಂದಿವೆ. ಮನುಷ್ಯನ ಬದುಕಿನಲ್ಲಿನ ಅಡಗಿರುವ ಕತ್ತಲೆಯನ್ನು ಹೊಡೆದೋಡಿಸುವ ಬೆಳಕನ್ನು ಪಸರಿಸುವ, ಮನೆಯಲ್ಲಷ್ಟೇ ಅಲ್ಲದೇ ಊರಿಗೂರೇ ಸೇರಿ ಆಚರಿಸುವ ಪ್ರಗತಿಯ ಸೂಚಕ ಹಬ್ಬ ದೀಪಾವಳಿ. ಭಾರತೀಯ ಸಂಪ್ರದಾಯದಲ್ಲಿ ಎಲ್ಲಾ ಧರ್ಮದವರು ಅಲ್ಲದೆ ನೇಪಾಳ, ಶ್ರೀಲಂಕಾ, ಮ್ಯಾನ್ಮಾರ, ಮಾರಿಷ್ಸ್, ಗಯಾನ್, ಟ್ರಿನಿಡಾಡ್, ಟೋಬಾಗೋ, ಸುರಿನಾಮೆ, ಮಲೇಷ್ಯಾ, ಸಿಂಗಪೂರ್ ಇತ್ಯಾದಿ ನೆರೆಯ ರಾಷ್ಟ್ರಗಳಲ್ಲಿ ಆಚರಣೆ ಮಾಡುವದನ್ನು ಕಾಣುತ್ತಿದ್ದೇವೆ.

ಪ್ರಾದೇಶಿಕವಾಗಿ ಬೆಳಕಿನ ಹಬ್ಬ, ನೀರು ತುಂಬುವ ಹಬ್ಬ, ಮಹಾಲಕ್ಷ್ಮೀ ಪೂಜೆ, ನರಕ ಚತುರ್ದಶಿ, ಹಟ್ಟಿಹಬ್ಬ,



ದೀಪಗಳನ್ನು ಹಚ್ಚುವ ಹಬ್ಬ, ದೀಪೋತ್ಸವ ಹೀಗೆ ಬೇರೆ ಬೇರೆ ಹೆಸರಿನಲ್ಲಿ ಆಚರಣೆ ಮಾಡುವ ವಾಡಿಕೆಯಿದೆ. ನಾಲ್ಕೈದು ದಿನಗಳ ಕಾಲ ನಿರಂತರವಾಗಿ ಜರುಗುವ ಹಬ್ಬದ ದಿನಗಳಲ್ಲಿ ಊಟ-ಉಪಚಾರ ಪೂಜೆಗಳಿಗಿಂತ ಅಲಂಕಾರ, ಸ್ವಚ್ಛತೆ, ಹೊಸ ಬಟ್ಟೆ ಧರಿಸುವದು, ಮನೆ ಬಳಕೆಯ ವಸ್ತುಗಳನ್ನು ಖರೀದಿಸುವ ಸಂಭ್ರಮ ಮುಗಿಲು ಮುಟ್ಟುತ್ತದೆ.

ನೀರುವ ತುಂಬುವ ಹಬ್ಬದ ದಿನ ಸ್ನಾನದ ನೀರಿನಲ್ಲಿ ಗಂಗೆ ಮತ್ತು ಧನಲಕ್ಷ್ಮೀ ಇರುತ್ತಾಳೆ ಎನ್ನುವ ನಂಬಿಕೆಯಿಂದ ಆ ನೀರಿನಲ್ಲಿಯೇ ಸ್ನಾನ ಮಾಡಿದರೆ ಆಯುರಾರೋಗ್ಯ ಆಯುಸ್ಸು ವೃದ್ಧಿಸಿ ಸಕಲ ಪಾಪಗಳು ನಿವಾರಣೆವಾಗುತ್ತವೆ ಎಂಬ ನಂಬಿಕೆಯಿದೆ. ಹೆಣ್ಣಮಕ್ಕಳೊಂದಿಗೆ ಮನೆಮಂದಿಯೆಲ್ಲಾ ಎಣ್ಣೆಹಚ್ಚಿ ತೈಲಸ್ನಾನ ಮಾಡುವರು. ಮನೆಯ ಮುಂದೆ ರಂಗೋಲಿ ಹಾಕಿ ತಳಿರು-ತೋರಣಗಳಿಂದ ಸಿಂಗರಿಸುವರು. ಮನೆಯಲ್ಲಿರುವ ಪಾತ್ರೆಗಳಲ್ಲಿ ನೀರು ತುಂಬಿ ಹರಳೆಣ್ಣೆ, ತುಪ್ಪದ ಹಣತೆ ಹಚ್ಚಿ ಬೆಳಗುವ ನೋಟ ನೋಡುವದಕ್ಕೆ ಚೆಂದ.

ಎರಡನೇಯ ದಿನ ಆಚರಣೆ ಮಾಡುವ ಹಬ್ಬ ನರಕ ಚತುರ್ದಶಿ. ಶ್ರೀ ಕಷ್ಣನು ನರಕಾಸುರನನ್ನು ಸಂಹರಿಸಿದ ಸಂಕೇತವಾಗಿ ಆಚರಣೆ ಮಾಡುವ ಹಬ್ಬ. ಅಂದು ಸೂರ್ಯೋದಯ ಪೂರ್ವದಲ್ಲಿ ಎಲ್ಲರೂ ಎದ್ದು ಎಣ್ಣೆ ಸ್ನಾನ ಮಾಡಿ ಹೊಸ ಬಟ್ಟೆ ಧರಿಸಿ, ಸುಮಂಗಲಿಯರಿಂದ ಆರತಿ ಮಾಡಿಸಿಕೊಂಡು ಪ್ರಿತಿಯಿಂದ ಉಡುಗೊರೆ ನೀಡಿ ಆಶಿರ್ವಾದ ಪಡೆದುಕೊಳ್ಳುವರು. ಈ ಬಗ್ಗೆ ಸೂರ್ಯಪುತ್ರನಾದ ಯಮದೇವನು ತನ್ನ ತಂಗಿಯ ಮನೆಗೆ ಹೋಗಿ ಊಟ ಮಾಡಿ ಆರತಿ ಮಾಡಿಸಿಕೊಂಡ ಜನಪದ ಕಥೆಯೊಂದಿದೆ.

ಮೂರನೆಯ ದಿನ ಅಮವ್ಯಾಸೆ ದಿನದಂದು ಮಹಾಲಕ್ಷ್ಮೀ, ಮಾಹಾ ಸರಸ್ವತಿ ಪೂಜೆಯನ್ನು ಮಾಡವರು. ಅಂದು ವಿಶೇಷವಾಗಿ ವ್ಯಾಪಾರಿಗಳು, ಉದ್ದಿಮೆದಾರರು ಅಂಗಡಿ, ಕಛೇರಿ, ಮನೆ, ಸಾರ್ವಜನಿಕ ಕಟ್ಟಡಗಳನ್ನು ಸುಣ್ಣಬಣ್ಣ, ತಳಿರು-ತೋರಣ, ವಿದ್ಯುತ್ ದೀಪಾಲಂಕಾರ ಮಾಡಿ ಶೃಂಗರಿಸುವರು. ಧನಲಕ್ಷ್ಮೀಗೆ ದೀಪಾರಾಧನೆಯ ಮೂಲಕ ವಾಣಿಜ್ಯದ ನೂತನ ವರುಷಕ್ಕೆ ಹೆಜ್ಜೆ ಇಡುವರು.

ನಾಲ್ಕನೇಯ ದಿನ ಆಚರಿಸುವ ಹಬ್ಬ ಬಲಿಪಾಡ್ಯಮಿ. ಬಲಿಚಕ್ರವರ್ತಿ ಭೂಲೋಕಕ್ಕೆ ಸಂಚಾರ ಮಾಡುವ ಬಲವಾದ ನಂಬಿಕೆಯಿಂದ ಈ ದಿನದಂದು ಬಲೀಂದ್ರ ಪೂಜೆಯನ್ನು ಬಹಳ ಸಡಗರದಲ್ಲಿ ಆಚರಣೆ ಮಾಡುತ್ತಾರೆ. ಸಗಣಿಯಿಂದ ಪಾಂಡವರ ಪ್ರತಿಮೆಗಳನ್ನು ಮಾಡಿ ಮನೆಯ ಮುಂದೆ, ದೇವರ ಮುಂದೆ ಇಟ್ಟು ಸುಣ್ಣ ಇಲ್ಲವೆ ರಂಗೋಲಿಯಿಂದ ಪಾಂಡವರು ಬರುವ ದೃಶ್ಯ, ಬೆಳೆದ ಜೋಳ, ರಾಗಿ ತೆನೆಗಳು, ಹೊನ್ನಂಬರಿ ಉತ್ರಾಣಿ, ಗುರಳ್ಳು, ತರಹತರದ ಹೂ-ಪತ್ರೆ ಏರಿಸಿ ಪೂಜಿಸಿ ಇಳಿಹೊತ್ತಿನಲ್ಲಿ ಮನೆಯಲ್ಲಿ ಮಾಡಿದ ಅಡುಗೆಯನ್ನು ಬುತ್ತಿಯಲ್ಲಿ ಕಟ್ಟಿಕೊಂಡು ಮನೆಯ ಭಾವಣಿಯಲ್ಲಿ ಕುಳಿತು ಊಟ ಮಾಡಿಬರುವ ಆ ದೃಶ್ಯ ನಾಗರಿಕತೆಯ ಕರಿನೆರಳಿನಲ್ಲಿ ಕಮರಿ ಹೋಗುತ್ತಿದೆ.

ಕೊನೆಯ ದಿನ ಐದನೇ ದಿವಸ ಮಾಡುವ ಹಬ್ಬ ವರ್ಷದೊಡಕು. ಅಂದಿನ ದಿನ ಏನಾದರೂ ಕೆಟ್ಟ ಕೆಲಸ ಮಾಡಿದರೆ ವರ್ಷದುದ್ದಕ್ಕೂ ಕೆಟ್ಟದ್ದಾಗುತ್ತದೆ ಎನ್ನುವ ಬಲವಾದ ನಂಬಿಕೆಯಿಂದ ಸಜ್ಜನಿಕೆಯಿಂದ ನಡೆದುಕೊಳ್ಳುವರು. ಉಂಡಿದ್ದೇ ಉಗಾದಿ, ಉಪವಾಸವಿದ್ದದ್ದೇ ಏಕಾದಶಿ, ಮಿಂದಿದ್ದೇ ದೀಪಾವಳಿ ಎನ್ನುವ ಈ ಜನವಾಣಿ ದೀಪಾವಳಿಯ ವಿಶೇಷತೆಯ ಮಹತ್ವನ್ನು ಕಂಡರಿಯಬಹುದಾಗಿದೆ.

ಆದರೆ, ಮೊದಲಿದ್ದ ಪ್ರಕೃತಿ ಆರಾಧನೆಯ ಮತ್ತು ಪರಿಸರ ಪ್ರಿಯವಾದ ಸಂಪ್ರದಾಯಗಳು, ಆಚರಣೆಗಳು ಕಡಿಮೆ ಆಗುತ್ತಿರುವದು ನಿಜಕ್ಕೂ ಖೇದಕರ. ಅತಿಯಾದ ಪಟಾಕಿ ಸುಡುವ, ಪ್ಲಾಸ್ಟಿಕ್‌ನಿಂದ ತಯಾರಿಸಿದ ಅಲಂಕಾರಿಕ ವಸ್ತುಗಳ ಬಳಕೆ, ಹಣತೆ, ದೀಪದ ಬದಲು ವಿದ್ಯುತ್ ದೀಪಗಳ ಬಳಕೆಯಿಂದ ದೀಪಾವಳಿಯ ನೈಜತೆ ಕಳೆದುಕೊಳ್ಳುತ್ತಿದೆ.



**– ವಿಶ್ವನಾಥ ಯ.ಕಮ್ಮಾರ.**
ಅಧ್ಯಾಪಕರು, ಗದಗ.

### ಪ್ರೌಢಶಾಲಾ ಮುಖ್ಯ ಶಿಕ್ಷಕರ ಕಾರ್ಯಾಗಾರ ಉದ್ಘಾಟಿಸಿದ ಡಿಸಿ ಸಿ.ಎನ್. ಶ್ರೀಧರ್

# ಗುರುವಿಲ್ಲದೆ ಗುರಿ ಸಾಧನೆ ಅಸಾಧ್ಯ



ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್ ಪೂಜಾರ ಮಾತನಾಡಿ, ಇಲಾಖೆ ಎಲ್ಲಾ ಕಾರ್ಯಕ್ರಮಗಳಲ್ಲಿ ನಾವೆಲ್ಲ ಬೆನ್ನೆಲುಬಾಗಿರುತ್ತೇವೆ. ಜೊತೆಗೆ ಅತ್ಯುತ್ತಮ ಫಲಿತಾಂಶ ನಮ್ಮ ಧ್ಯೇಯವಾಗಿರಲಿ ಎಂದು ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಗುರು ಎಂದರೆ ಮಾರ್ಗದರ್ಶಕ, ಬೆಳಕಿನ ದಾರಿಯನ್ನು ತೋರಿಸುವವನು. ಗುರಿ ಎಂದರೆ ಬದುಕಿನ ಉದ್ದೇಶ, ಸಾಧನೆ ಅಥವಾ ಕನಸು. ಜೀವನದಲ್ಲಿ ಒಬ್ಬ ಗುರು, ಮಾರ್ಗದರ್ಶಕ ಅಥವಾ ಪ್ರೇರಣಾದಾಯಕ ವ್ಯಕ್ತಿಯಿಲ್ಲದೆ ಮಕ್ಕಳು ಯಶಸ್ಸು ಸಾಧಿಸುವುದು ಕಷ್ಟ. ಗುರುವು ನಮ್ಮೊಳಗಿನ ಅಂದರೆ ಮಕ್ಕಳ ಸಾಮರ್ಥ್ಯವನ್ನು ಗುರುತಿಸಿ, ಅವರನ್ನು ಸರಿಯಾದ ದಿಕ್ಕಿನಲ್ಲಿ ನಡೆಸುವಂತೆ ಮಾಡುತ್ತಾನೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಮುನ್ನೋಟ ಸಭೆ-2026ರಲ್ಲಿ ಫಲಿತಾಂಶ ವೃದ್ಧಿಗಾಗಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಶಾಲೆಯ ವಿವಿಧ ಅಂಶಗಳ ಹಾಗೂ ಎಸ್.ಎಂ 1 ಫಲಿತಾಂಶ ವಿಶ್ಲೇಷಣೆ ಮಾಡಿ ನಿರ್ದಿಷ್ಟ ಗುರಿ ಹಾಗೂ ಬದ್ಧತೆಯೊಂದಿಗೆ ಕೆಲಸ ನಿರ್ವಹಿಸುವುದು, ಎಲ್‌ಬಿಎಗಳನ್ನು ಪಾಠಗಳ ಪೂರ್ವಸಿದ್ಧತೆಯಲ್ಲಿ ಬಳಸಿಕೊಂಡು ಮಗುವಿಗೆ ಚಿಕಿತ್ಸಕ ವಿಧಾನದಲ್ಲಿ ಮಗುವಿನ ಮಟ್ಟಕ್ಕೆ ಇಳಿದು, ಪಾಠದ ಉದ್ದೇಶವನ್ನರಿತು ಪೂರ್ವ ತಯಾರಿಯೊಂದಿಗೆ ಲಭ್ಯವಿರುವ ಕಲಿಕಾ ಬೋಧನೋಪಕರಣ ಹಾಗೂ ತಂತ್ರಜ್ಞಾನದ ಸಾಮಗ್ರಿಗಳನ್ನು ಬಳಸಿಕೊಂಡು ಮಗುವಿನ ಭಾಗವಹಿಸುವಿಕೆಯೊಂದಿಗೆ ಚಟುವಟಿಕೆ ಆಧಾರಿತವಾಗಿ ಪರಿಣಾಮಕಾರಿ ಬೋಧಿಸುವ ಕಲಿಸುವ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವುದು ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ, ಡಯಟ್ ಪ್ರಾಚಾರ್ಯರಾದ ಮಂಗಳಾ ತಾಪಸ್ಕರ್, ಎಸ್‌ಎಸ್‌ಎಲ್‌ಸಿ ಜಿಲ್ಲಾ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಿವೈಪಿಸಿಗಳಾದ ಎಂ.ಎಚ್. ಕಂಬಳಿ, ರವಿಪ್ರಕಾಶ್ ಎಸ್.ಎನ್, ಜಿಲ್ಲೆಯ ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್‌ನ ಹಿರಿಯ ಉಪನ್ಯಾಸಕರು, ಜಿಲ್ಲೆಯ ಶಾಲಾ ದತ್ತು ಅಧಿಕಾರಿಗಳು, ಜಿಲ್ಲೆಯ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಜರಿದ್ದರು. ಕಾರ್ಯಕ್ರಮವನ್ನು ಎಂ.ಎ. ಯರಗುಡಿ ನಿರೂಪಿಸಿದರು. ಎಂ.ಹೆಚ್. ಕಂಬಳಿ ವಂದಿಸಿದರು.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025-26ನೇ ಸಾಲಿನಲ್ಲಿ ಸುವಿಧಾ ಯೋಜನೆ ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ.

ಈ ಯೋಜನೆಗಳನ್ನು ಆನಲೈನ್ ವೇದಿಕೆಯಿಂದ ಅನುಷ್ಠಾನಗೊಳಿಸುವ ಉದ್ದೇಶದಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯಡಿ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನಲೈನ್ ವೇದಿಕೆಯಲ್ಲಿ ಆಧಾರ, ವೈದ್ಯಕೀಯ ಪರಿಹಾರ ನಿಧಿ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ನಿರುದ್ಯೋಗ ಭತ್ಯೆ, ಶಿಶು ಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್, ದೈಹಿಕ ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ ಸಲಕರಣೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವೀಲ್ ಚೇರ್ ವಿತರಣೆಯ ಯೋಜನೆಗಳಿವೆ.

ಸದರಿ ಯೋಜನೆಗಳಿಗೆ 2025-26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಮೂಲಕ ಗ್ರಾಮ ಒನ್, ಕರ್ನಾಟಕ ಒನ್ ಅಥವಾ ನೇರವಾಗಿಯೂ ವಿಕಲಚೇತನರ ವ್ಯಕ್ತಿಗಳು ಅರ್ಜಿ ಸಲ್ಲಿಸಬಹುದು. (https://sevasindhu.karnataka.gov.in/Sevasindhu/Kannda) ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವನ್ನು ಅ. 31ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾ.ಪಂ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎವ್.ಆರ್.ಡಬ್ಲ್ಯೂಗಳಾದ ಖಾಜಾಹುಸೇನ ಕಾತರಕಿ, ತಾ.ಪಂ ಗದಗ-8867556465; ಬಸವರಾಜ ಓಲಿ, ತಾ.ಪಂ ರೋಣ-9741615926; ಶಶಿಕಲಾ ವಡ್ಡಟ್ಟಿ, ತಾ.ಪಂ ಮುಂಡರಗಿ-9611922445; ಭಾರತಿ ಮುರಶಿಳ್ಳಿ, ತಾ.ಪಂ ಶಿರಹಟ್ಟಿ-8951128679; ಶಿವಾನಂದ ಹಾದಿಮನಿ, ತಾ.ಪಂ ನರಗುಂದ-9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029ರ ದೂರವಾಣಿ ಸಂಖ್ಯೆ-08372-220419 ಮೂಲಕ ಸಂಪರ್ಕಿಸಬಹುದಾಗಿದೆ.

## ಇನ್ಮುಂದೆ ನಂದಿನಿ ಹಾಲಿನಲ್ಲಿ ನಕಲಿ, ಕಲಬೆರಕೆ ತಕ್ಷಣ ಗುರುತಿಸಬಹುದು; ಹೊಸ ಟೆಕ್ನಾಲಜಿ ಪರಿಚಯಿಸಿದ KMF

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಾವು ಸೇವಿಸುವ ಹಾಲು, ಮೊಸರು ಸೇರಿದಂತೆ ದಿನಪಯೋಗಿ ಉತ್ಪನ್ನಗಳಲ್ಲಿ ಕಲಬೆರಕೆ ಮತ್ತು ನಕಲಿ ಉತ್ಪನ್ನಗಳ ಸಮಸ್ಯೆ ಹೆಚ್ಚುತ್ತಿರುವುದು ಗ್ರಾಹಕರಿಗೆ ತಲೆನೋವಾಗಿದೆ.

ಈ ನಡುವೆ ಕರ್ನಾಟಕದ ಹೆಮ್ಮೆಯ ಬ್ರ್ಯಾಂಡ್ ನಂದಿನಿ ಗ್ರಾಹಕರು ತನ್ನ ಮೇಲೆ ಇಟ್ಟಿರುವ ನಂಬಿಕೆ ಉಳಿಸಿಕೊಳ್ಳಲು ಮುಂದಾಗಿದೆ ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಶಿವಸ್ವಾಮಿ ತಿಳಿಸಿದ್ದಾರೆ.

ಶೀಘ್ರವೇ ನಂದಿನಿ ಉತ್ಪನ್ನಗಳ ಮೇಲೆ ಕಿಖ ಕೋಡ್ ಅಂಟಿಸಲಾಗುವುದು. ಇದರ ಮೂಲಕ ಉತ್ಪನ್ನಗಳ ಮಾಹಿತಿಯನ್ನು ತಕ್ಷಣ ಪರಿಶೀಲಿಸಬಹುದು ಮತ್ತು ಯಾವುದು ಅಸಲಿ, ಯಾವುದು ನಕಲಿ ಎಂಬುದನ್ನು ಗುರುತಿಸಬಹುದು. ಜೊತೆಗೆ ನಕಲಿ ಹಾಗೂ ಕಲಬೆರಕೆ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಪ್ರತಿದಿನ ಸರಾಸರಿ 1 ಕೋಟಿ ಲೀಟರ್ ಹಾಲು ಸಂಗ್ರಹವಾಗುತ್ತಿದ್ದು, 65 ಲಕ್ಷ ಲೀಟರ್ ಹಾಲು, ಮೊಸರು ಮತ್ತು ಇತರ ಉತ್ಪನ್ನಗಳು ಗ್ರಾಹಕರಿಗೆ ತಲುಪುತ್ತಿದೆ.

# ಸ್ಕೇಟಿಂಗ್‌ನಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸ್ಕೇಟಿಂಗ್ ಅಸೋಸಿಯೇಷನ್ ಆಶ್ರಯದಲ್ಲಿ ಪರಿಸರ ಲೇಔಟ್‌ನಲ್ಲಿ ಇತ್ತೀಚೆಗೆ ಜರುಗಿದ ಜಿಲ್ಲಾ ಮಟ್ಟದ ಸ್ಕೇಟಿಂಗ್ ಸ್ಪರ್ಧೆಯಲ್ಲಿ 28 ಕ್ರೀಡಾಪಟುಗಳು ಆಯ್ಕೆಯಾಗಿದ್ದು, ಸ್ಪರ್ಧೆಯಲ್ಲಿ ವಿಜೇತರಾದ ಕ್ರೀಡಾಪಟುಗಳು ಕರ್ನಾಟಕ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ನಡೆಸಿಕೊಡುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ಅಕುಲ್ ಕುರಿ, ಅನನ್ಯ ಕುರಿ, ಮಣಿಕಂಠ ಅನವಾಲದ, ಪೃಥಿರಾಜ್ ಬೂದಿಹಾಳ, ಆದಿತ್ಯ ಎಲಿಶೆಟ್ಟರ್, ಯಶಸುಕುಮಾರ ಶಿಗ್ಲಿ, ಆರವ್ ಶೆಟ್ಟರ್, ಮನೋಜ್ ಹಾದಿಮನಿ, ಸಿರಿ ಕುರಿ, ಸಿಂಧು ಅಕ್ಕಿ, ವಿರಾಜ್ ಶೇಷ್ಠಿ, ವಿಶ್ವನಾಥ ಬಳ್ಳೊಳ್ಳಿ, ಧ್ರೂತಿ ಸಿ.ಪಿ.ನಾಗಶ್ರೀ, ಸಂಚಿತ್ ಶೆಟ್ಟಿ, ವಿನೀತ, ಅನ್ವಿತಾ ಸೇರಿ 28 ಸ್ಪರ್ಧಿಗಳು ರಾಜ್ಯ ಮಟ್ಟದಲ್ಲಿ ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಸ್ಕೇಟಿಂಗ್ ತರಬೇತುದಾರ ಮಂಜುನಾಥ ಕುರಿ ತಿಳಿಸಿದ್ದಾರೆ.

## ಫುಡ್ ಡೆಲಿವರಿ ಬಾಯ್‌ಗಳ ಮೊಬೈಲ್ ದೋಚುತ್ತಿದ್ದ "ನೇಪಾಳಿ ಗ್ಯಾಂಗ್" ಬಂಧನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ ಫುಡ್ ಡೆಲಿವರಿ ಬಾಯ್‌ಗಳ ಮೊಬೈಲ್‌ಗಳನ್ನು ಗುರಿಯಾಗಿಸಿಕೊಂಡು ದರೋಡೆ ಮಾಡುತ್ತಿದ್ದ ನೇಪಾಳಿ ಮೂಲದ ನಾಲ್ವರು ಆರೋಪಿಗಳನ್ನು ಬೆಳ್ಳಂದೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ 9 ಮೊಬೈಲ್ ಫೋನ್‌ಗಳು ಹಾಗೂ 3 ದ್ವಿಚಕ್ರ ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ. ದರೋಡೆಗೊಳಗಾದ ಸುರೇಶ್ (22) ಎಂಬವರು ನೀಡಿದ ದೂರಿನ ಮೇರೆಗೆ, ಪೊಲೀಸರು ಪಾರಸ್ ಸಿಂಗ್ (25), ಮುಕೇಶ್ ಸಾಯಿ (19), ಬಿಪಿನ್ ಕರ್ಕಿ (20), ಸಮೀರ್ ಲೋಹಾರ್ ಎಂಬ ಆರೋಪಿಗಳನ್ನು ಬಂಧಿಸಿದ್ದಾರೆ.

## ಬೆಂಗಳೂರಿನಲ್ಲಿ ಪಟಾಕಿ ಸ್ಫೋಟ: 68 ಜನರ ಕಣ್ಣಿಗೆ ಹಾನಿ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೀಪಾವಳಿ ಸಂಭ್ರಮದಲ್ಲಿ ಪಟಾಕಿ ಹಚ್ಚುವಾಗ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಅವಘಡಗಳಾಗಿದ್ದು, 68 ಜನರ ಕಣ್ಣು ಗಾಯಗೊಂಡಿದೆ.

ಕಳೆದ ಎರಡು ದಿನಗಳಲ್ಲಿ ಮಿಂಟೋ ಆಸ್ಪತ್ರೆಯಲ್ಲಿ 25 ಮಂದಿ, ನಾರಾಯಣ ನೇತ್ರಾಲಯದಲ್ಲಿ 43 ಮಂದಿ ಚಿಕಿತ್ಸೆ ಪಡೆದಿದ್ದಾರೆ. ನಾಲ್ವರು ಗಂಭೀರ ಸ್ಥಿತಿಯಲ್ಲಿ ಇದ್ದು, ಮೂವರಿಗೆ ಶಸ್ತ್ರಚಿಕಿತ್ಸೆ ಮಾಡಲಾಗಿದೆ.

ಗಾಯಗೊಂಡವರಲ್ಲಿ 16 ವರ್ಷದ ಬಾಲಕ ದೃಷ್ಟಿ ಕಳೆದುಕೊಂಡಿದ್ದಾರೆ, 18 ವರ್ಷದ ಯುವಕನ ಕಣ್ಣು ಗಂಭೀರವಾಗಿ ಹಾನಿಯಾಗಿದೆ. ಹಾಗೂ 10 ವರ್ಷದ ಬಾಲಕನ ಮುಖದ ಬಳಿಯೇ ಪಟಾಕಿ ಸ್ಫೋಟದಿಂದ ರೆಪ್ಪೆ ಸುಟ್ಟಿದೆ.

ವೈದ್ಯರು ಪೋಷಕರಿಗೆ ಮಕ್ಕಳೊಂದಿಗೆ ಎಚ್ಚರಿಕೆಯಿಂದ ಪಟಾಕಿ ಹಚ್ಚಲು, ಕಣ್ಣಿನ ಸುರಕ್ಷತೆಗಾಗಿ ಕನ್ನಡಕ ಧರಿಸಲು ಸಲಹೆ ನೀಡಿದ್ದಾರೆ.

### ದೀಪದ ಬೆಳಕಿನಲ್ಲಿ ನಾವು ಬದುಕಿನ ಭರವಸೆಗಳನ್ನು ಬೆಳೆಸಿಕೊಳ್ಳೋಣ

# ಎಲ್ಲೆಲ್ಲೂ ಹರಡಲಿ ಬೆಳಕು

ದೀಪಾವಳಿ ಹಿಂದೂಗಳಿಗೆಲ್ಲ ಸಡಗರ-ಸಂಭ್ರಮದ ಹಬ್ಬ. ವರ್ಷವಿಡೀ ಆಚರಿಸುವ ಹಬ್ಬಗಳಲ್ಲೆಲ್ಲಾ ದೀಪಾವಳಿಗೆ ಅತ್ಯಂತ ಮಹತ್ವದ ಸ್ಥಾನವಿದೆ. ಬೆಳಕಿನ ಹಬ್ಬ ದೀಪಾವಳಿ ಮತ್ತೆ ಬಂದಿದೆ. ಭಾರತದಾದ್ಯಂತ ಆಚರಿಸುವ ಹಬ್ಬವೆಂದರೆ ದೀಪಾವಳಿ. 'ತಮಸೋಮಾ ಜ್ಯೋತಿರ್ಗಮಯ' ಕತ್ತಲಿನಿಂದ ಬೆಳಕಿನ ಕಡೆಗೆ ಸಾಗುವ ಹಬ್ಬವೇ ದೀಪಾವಳಿ.

ದೀಪಗಳ ಹಬ್ಬದ ವೈಶಿಷ್ಟವೇ ಅಂಥಾದ್ದು. ಎಲ್ಲಿ ಕತ್ತಲಿದೆಯೋ ಅಲ್ಲಿ ಬೆಳಕಿರಬೇಕು. ಕತ್ತಲೆಂದರೆ ಅಜ್ಞಾನ, ಕತ್ತಲೆಂದರೆ ಅಂಧಕಾರ, ಕತ್ತಲೆಂದರೆ ಸೋಲು. ಬೆಳಕು ಎಂದರೆ ಯಶಸ್ಸು. ಕತ್ತಲೆಂದರೆ ಕಷ್ಟಗಳ ಸಂಕೋಲೆ, ಬೆಳಕೆಂದರೆ ಬಿಡುಗಡೆ. ಅಂದರೆ ನಮ್ಮ ಅಜ್ಞಾನವನ್ನು ಬೆಳಕಿನ ಮೂಲಕ ತೊಡೆದು ಹಾಕುವ ಹಬ್ಬವೇ



ದೀಪಾವಳಿ. ದೀಪಾವಳಿ ಅಮಾವಾಸ್ಯೆಗೂ ಇಲ್ಲಿ ಮಹತ್ವವಿದೆ. ಅಮಾವಾಸ್ಯೆಯ ದಿನ ಲಕ್ಷ್ಮೀ ಪೂಜೆಯೂ ನಡೆಯುತ್ತದೆ. ಲಕ್ಷ್ಮಿಯು ಕತ್ತಲನ್ನು ಕಳೆದು ಬೆಳಕು ತರುವ ಮಹಾ ತೇಜಸ್ವಿನಿ. ಕತ್ತಲೆಯಿಂದ ಬೆಳಕಿನ ಕಡೆಗೆ ಸಾಗುವುದೇ ಬದುಕು.

ಹೀಗಾಗಿ ದೀಪಾವಳಿಯಲ್ಲಿ ಜ್ಯೋತಿ ಸ್ವರೂಪಿಣಿ ಲಕ್ಷ್ಮಿಯನ್ನು ಭಯ-ಭಕ್ತಿಯಿಂದ ಪೂಜಿಸುತ್ತಾರೆ. ಹಬ್ಬದ ದಿನ ಬೆಳಗ್ಗೆ ಎದ್ದು ಮನೆಯಂಗಳದಲ್ಲಿ ಸಗಣಿ ಸಾರಿಸಿ, ದೀಪಗಳ ಚಿತ್ರಗಳ ರಂಗೋಲಿ ಬಿಡಿಸಿ, ಬಣ್ಣ ಮತ್ತು ಹೂವುಗಳಿಂದ ರಂಗೋಲಿಗೆ ಅಲಂಕಾರ ಮಾಡುತ್ತಾರೆ. ಮನೆಯ ಹೊಸ್ತಿಲು ಮತ್ತು ದೇವರ ಕೋಣೆಯನ್ನು ಮಾವಿನ ತಳಿರು-ತೋರಣಗಳು ಮತ್ತು ಹೂವುಗಳಿಂದ ಅಲಂಕರಿಸುತ್ತಾರೆ. ಹೊಸ ಬಟ್ಟೆ ತೊಟ್ಟು ಬಂಧು-ಮಿತ್ರರು ಮತ್ತು ಸ್ನೇಹಿತರಿಗೆ ದೀಪಾವಳಿಯ ಶುಭಾಶಯ ಹೇಳಿ, ಸ್ನೇಹಿತರೊಂದಿಗೆ ಪಟಾಕಿ ಹೊಡೆಯುತ್ತಾರೆ. ಮನೆಯಲ್ಲಿ ಪೂಜೆ ಪುನಸ್ಕಾರ ಮುಗಿಸಿ ಊಟ ಮಾಡುವ ಹೊತ್ತಿಗೆ ಮಧ್ಯಾಹ್ನ ಆಗುತ್ತದೆ.

ಕಷ್ಟದ ಕತ್ತಲನ್ನು ದೀಪದ ಜ್ಯೋತಿಯಿಂದ ದೂರವಾಗಿಸಿಕೊಂಡು ಹೊಸ ಬಾಳಿಗೆ ಹೊಸದೊಂದು ಮುನ್ನುಡಿ ಬರೆಯುವ ಪ್ರಯತ್ನವೇ ಈ ದೀಪಾವಳಿ. ದೀಪ ಹಚ್ಚಿ ಮನೆ ಒಳ-ಹೊರಗೆ ದೀಪ ಬೆಳಗಿಸಿ, ಈ ದೀಪದ ಬೆಳಕು ಮುಂದಿನ ದೀಪಾವಳಿಯವರೆಗೂ ನಮ್ಮ ಬದುಕಿನ ದಾರಿ ತೋರಿಸಲಿ. ಜೀವನದಲ್ಲಿ ಏಳು ಬೀಳುಗಳು ಸಹಜ. ಕಷ್ಟ-ಸುಖಗಳು ಒಂದೇ ನಾಣ್ಯದ ಮುಖಗಳು. ಬದಲಾಗುವವರೆಗೂ ಕಾಯುವವರಿಗೆ ಮಾತ್ರ ಸುಖದ ದರ್ಶನವಾಗುವುದು. ಆ ತಾಳ್ಮೆ, ನೆಮ್ಮದಿ ನಮ್ಮಲ್ಲಿರಬೇಕು. ಬನ್ನಿ, ಎಲ್ಲರೂ ದೀಪ ಹಚ್ಚೋಣ. ದೀಪಾವಳಿ ತಂದಿರುವ ಈ ದಿವ್ಯ ಜ್ಯೋತಿಯ ಬೆಳಕಿನಿಂದಲೇ ನಮ್ಮ ಮನೆ ಅಂಗಳದಲ್ಲಿ ದೀಪಗಳನ್ನು ಹಚ್ಚಿ, ಆ ದೀಪದ ಬೆಳಕಿನಲ್ಲಿ ನಾವು ಬದುಕಿನ ಭರವಸೆಗಳನ್ನು ಬೆಳೆಸಿಕೊಳ್ಳೋಣ.



**– ವಿ.ಎಂ.ಎಸ್. ಗೋಪಿ.**
ಲೇಖಕರು, ಬೆಂಗಳೂರು.

**ಸರ್ಕಾರಿ ಶಾಲೆಯ ಶಿಕ್ಷಕನ ವಿನೂತನ ಪ್ರಯತ್ನ: ರಾಜ್ಯದಲ್ಲಿ ಮೊದಲ ಬಾರಿಗೆ ಪ್ರಶಂಸನಾ ಪತ್ರ ಯೋಜನೆ**

# ಮಕ್ಕಳನ್ನು ಶಾಲೆಯತ್ತ ಸೆಳೆಯಲು ಹೊಸ ಮಾರ್ಗ



ವಿದ್ಯಾರ್ಥಿಗಳನ್ನು ಶಾಲೆಯತ್ತ ಆಕರ್ಷಿಸಲು ಶಾಲಾ ದಾಖಲಾತಿ ಹೆಚ್ಚಳಕ್ಕೆ ಹಮ್ಮಿಕೊಂಡಿರುವ ಕಾರ್ಯ ಇತರ ಸರ್ಕಾರಿ ಶಾಲೆಗಳಿಗೂ ಈ ಮಾದರಿಯಾಗಿದ್ದು, ಅಳವಡಿಸಿಕೊಳ್ಳುವಂತೆ ಸೂಚನೆ ನೀಡಲಾಗಿದೆ. ಶಿಕ್ಷಣ ಇಲಾಖೆಯು ಈ ರೀತಿಯ ನೂತನ ಯೋಜನೆಗಳನ್ನು ರಾಜ್ಯ ಮಟ್ಟದಲ್ಲಿ ಅಳವಡಿಸಿದರೆ ಸರ್ಕಾರಿ ಶಾಲೆಗಳ ಮೇಲೆ ಜನರ ವಿಶ್ವಾಸವನ್ನು ಪುನಃ ಸ್ಥಾಪಿಸಲು ಸಾಧ್ಯ.

**– ಆರ್.ಎಸ್. ಬುರಡಿ.**
ಉಪನಿರ್ದೇಶಕ, ಶಾಲಾ ಶಿಕ್ಷಣ ಇಲಾಖೆ.




ಬಹುಮಾನವು ಕಲಿಕೆಯ ಮೇಲೆ ಪರಿಣಾಮ ಬೀರಬಲ್ಲ ಮಹತ್ವದ ಅಂಶ. ಕಡಿಮೆ ದಾಖಲಾತಿ ಇರುವ ಸರಕಾರಿ ಶಾಲೆಗಳಲ್ಲಿ ಗೈರು ಹಾಜರಾತಿ ಹೆಚ್ಚಾದರೆ ಕಲಿಕಾ ಪ್ರಕ್ರಿಯೆ ಮತ್ತು ಶಿಕ್ಷಕರ ಬೋಧನೆಯ ಮೇಲೆ ನಕಾರಾತ್ಮಕ ಪ್ರಭಾವ ಬೀರುತ್ತದೆ. ಆದ್ದರಿಂದ ಶಾಲೆಗೆ ಪ್ರತಿ ತಿಂಗಳು ಗೈರು ಹಾಜರಾಗದ, ಅತಿ ಹೆಚ್ಚು ದಿನ ಶಾಲೆಗೆ ಹಾಜರಾಗುವ ಮಗುವಿಗೆ ಪ್ರೋತ್ಸಾಹ ನೀಡಲು ಹಾಜರಾತಿ ಅಭಿನಂದನಾ ಪತ್ರ ನೀಡಿ ಪ್ರಶಂಸಿಸುವ ಮೂಲಕ ಮಕ್ಕಳನ್ನು ಶಾಲೆಗೆ ಕರೆ ತರುವ ಆಲೋಚನೆಯಾಗಿದೆ. ಇದು ಗೈರು ಹಾಜರಾಗುವ ಒಂದು ಮಗುವಿನಲ್ಲಾದರೂ ಶಾಲೆಗೆ ಹಾಜರಾಗಲು ಉತ್ಸಾಹ ದೊರೆಯುತ್ತದೆ.

**– ವಿಜಯ ಕುಮಾರ್ ಡಿ.ಆರ್.**
ಶಿಕ್ಷಕರು, ಸ.ಹಿ.ಪ್ರಾ. ಶಾಲೆ–ಕೋಚಲಾಪೂರ.

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರ್ಕಾರಿ ಶಾಲೆಗಳ ಅಸ್ತಿತ್ವವೇ ಸವಾಲಾಗಿರುವಾಗ ಖಾಸಗಿ ಶಾಲೆಗಳು ಶಿಕ್ಷಣವನ್ನು ಸೇವೆಯ ಬದಲಿಗೆ ವ್ಯಾಪಾರವಾಗಿ ಪರಿವರ್ತಿಸಿಕೊಂಡಿದ್ದು, ಪೋಷಕರ ಮೇಲೆ ಅನಾವಶ್ಯಕ ಶುಲ್ಕದ ಭಾರ ಹಾಕಿ ಅವರನ್ನು ಬಲವಂತವಾಗಿ ಸೆಳೆಯುತ್ತಿವೆ. ಇದರ ಪರಿಣಾಮವಾಗಿ ಗ್ರಾಮೀಣ ಪ್ರದೇಶದ ಅನೇಕ ಸರ್ಕಾರಿ ಶಾಲೆಗಳು ವಿದ್ಯಾರ್ಥಿ ಸಂಖ್ಯೆಯ ಕೊರತೆಯಿಂದ ಮುಚ್ಚುವ ಹಂತಕ್ಕೆ ತಲುಪಿವೆ.

ಆದರೆ, ಇದರ ನಡುವೆ, ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ವಾರ್ಡ್ ನಂ.1ರ ಕೋಚಲಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಕೈಗೊಂಡ ವಿನೂತನ ಮತ್ತು ಹೃದಯಸ್ಪರ್ಶಿ ಪ್ರಯತ್ನ ರಾಜ್ಯದಾದ್ಯಂತ ಗಮನ ಸೆಳೆಯುತ್ತಿದೆ. ಶಿಕ್ಷಣವನ್ನು ವ್ಯಾಪಾರದಿಂದ ಹಿಂದಿರುಗಿಸಿ, ಶುದ್ಧ ಪ್ರೇರಣೆ ಮತ್ತು ಗೌರವದ ಮೂಲಕ ಮಕ್ಕಳನ್ನು ಶಾಲೆಯತ್ತ ಸೆಳೆಯುವ ಈ ಪ್ರಯತ್ನ ಈಗ ಮಾದರಿಯಾಗಿದೆ.

ಸ್ಥಳೀಯ ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರಾದ ವಿಜಯಕುಮಾರ ಡಿ.ಆರ್ ಸರ್ಕಾರಿ ಶಾಲೆಯನ್ನು ಉಳಿಸಲು ಮತ್ತು ಬೆಳೆಸಲು ಹೊಸ ಯೋಜನೆಯನ್ನು ರೂಪಿಸಿದ್ದಾರೆ. ಆಂಗ್ಲ ಶಾಲೆಗಳ ಆಕರ್ಷಣೆಗೆ ಬಲಿಯಾಗುತ್ತಿದ್ದ ಮಕ್ಕಳನ್ನು ಮತ್ತೆ ಸರ್ಕಾರಿ ಶಾಲೆಯತ್ತ ತಿರುಗಿಸಲು ಅವರು ಆರಂಭಿಸಿರುವ ಪ್ರಶಂಸೆ ಪತ್ರ ಯೋಜನೆ ರಾಜ್ಯದಲ್ಲೇ ಮೊದಲ ಬಾರಿಗೆ ಜಾರಿಗೊಂಡಿರುವ ವಿಶಿಷ್ಟ ಕ್ರಮವಾಗಿದೆ.

ಈ ಯೋಜನೆಯಡಿ, ಶಾಲೆಗೆ ತಿಂಗಳ ಪೂರ್ತಿ ಶೇ. 100ರಷ್ಟು ಹಾಜರಾಗುವ ವಿದ್ಯಾರ್ಥಿಗಳಿಗೆ ವಿಶೇಷ ಪ್ರಶಂಸನಾ ಪತ್ರ ನೀಡಲಾಗುತ್ತದೆ. ಶಾಲೆಯ ಬೆಳಗಿನ ಪ್ರಾರ್ಥನಾ ಸಭೆಯಲ್ಲಿ ವಿದ್ಯಾರ್ಥಿಗಳ ಹೆಸರನ್ನು ಘೋಷಿಸಿ, ಎಲ್ಲರ ಎದುರು ವೇದಿಕೆಯಲ್ಲಿ ಅವರಿಗೆ ಗೌರವ ಸಲ್ಲಿಸಲಾಗುತ್ತದೆ. ಈ ವೇಳೆ ಸಹಪಾಠಿಗಳ ಚಪ್ಪಾಳೆ, ಶಿಕ್ಷಕರ ಅಭಿನಂದನೆ ಮತ್ತು ಎಲ್ಲರ ಕಣ್ಣಗಳಲ್ಲಿ ಮೂಡುವ ಹೆಮ್ಮೆ ಇವೆಲ್ಲವೂ ಮಕ್ಕಳ ಮನಸ್ಸಿನಲ್ಲಿ ಶಾಲೆಯತ್ತ ಒಂದು ಹೊಸ ಪ್ರೇರಣೆಯ ವಾತಾವರಣ ನಿರ್ಮಿಸುತ್ತಿವೆ.

ಇದರ ಜೊತೆಗೆ ಬ್ಯಾಗ್, ಪುಸ್ತಕ, ಪೆನ್ ಮುಂತಾದ ಕಲಿಕಾ ಸಾಮಗ್ರಿಗಳ ವಿತರಣೆಯ ಮೂಲಕ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಪ್ರೋತ್ಸಾಹ ನೀಡಲಾಗುತ್ತದೆ. ಶಿಸ್ತು, ಸಮಯಪಾಲನೆ ಮತ್ತು ನಿತ್ಯ ಹಾಜರಾತಿಯನ್ನು ಪ್ರಶಂಸೆಯ ಮೂಲಕ ಬಲಪಡಿಸುವ ಈ ಕ್ರಮದಿಂದ ಶಾಲೆಯ ಹಾಜರಾತಿ ಪ್ರಮಾಣ ಶೇ. 60ರಿಂದ ನೇರವಾಗಿ ಶೇ.95ಕ್ಕೆ ಹೆಚ್ಚಾಗಲು ಸಹಕಾರಿಯಾಗಲಿದೆ.

ಆಂಗ್ಲ ಮತ್ತು ಖಾಸಗಿ ಶಾಲೆಗಳ ಅರ್ಭಟದ ನಡುವೆ ರಾಜ್ಯದ ಒಂದು ಸರ್ಕಾರಿ ಶಾಲೆಯ ಶಿಕ್ಷಕ ತಮ್ಮ ವಿನೂತನ ಪ್ರಯತ್ನಗಳ ಮೂಲಕ ಮಕ್ಕಳನ್ನು ಶಾಲೆಗೆ ಸೆಳೆಯುವ ಮಾದರಿಯಾಗಿದೆ. ಸರ್ಕಾರ ಮತ್ತು ಶಿಕ್ಷಣ ಇಲಾಖೆ ಇಂತಹ ಯೋಜನೆಗಳಿಗೆ ಪ್ರೋತ್ಸಾಹ ನೀಡಿ, ರಾಜ್ಯದಾದ್ಯಂತ ಅಳವಡಿಸಿದರೆ ಸರ್ಕಾರಿ ಶಾಲೆಗಳ ಘನತೆ ಮತ್ತೆ ಏರಿಕೆಯಾಗುವುದು ಖಚಿತ ಎಂಬುದು ಶಿಕ್ಷಣ ತಜ್ಞರ ಅಭಿಪ್ರಾಯ.

# ನಾಳೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಅಕ್ಟೋಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್ ತಂಗಡಗಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ. ಆಗಮಿಸುವರು. ಲಕ್ಷ್ಮೇಶ್ವರದ ಅಗಡಿ ಇಂಜಿನೀಯರಿಂಗ್ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ.ಸೋಮಶೇಖರ ಸಿ ಕೆರಿಮನಿ ಉಪನ್ಯಾಸಕರಾಗಿ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಸ್ವಾಗತ ಕೋರಿದ್ದಾರೆ.

# ಸಂಪ್ರದಾಯಬದ್ಧ ದೀಪಾವಳಿ ಆಚರಣೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರಿನಲ್ಲಿನ ಹತ್ತಾರು ಸಂಕಷ್ಟಗಳ ನಡುವೆಯೂ ನಾಡಿನ ದೊಡ್ಡ ಹಬ್ಬ ದೀಪಾವಳಿಯನ್ನು ಸಂಪ್ರದಾಯಬದ್ಧವಾಗಿ, ಸಡಗರ–ಸಂಭ್ರಮದಿಂದಲೇ ಆಚರಿಸಿದ್ದು ಬೆಳಕಿನ ಹಬ್ಬದ ಸಂಭ್ರಮಕ್ಕೆ ಸಾಕ್ಷಿಯಾಗಿದೆ.



ದೀಪಾವಳಿ ಅಮಾವಾಸ್ಯೆ ನಿಮಿತ್ತ ಪಟ್ಟಣ ಸೇರಿ ತಾಲೂಕಿನಾದ್ಯಂತ ಮಂಗಳವಾರ ಲಕ್ಷ್ಮೀ ಪೂಜೆ ವೈಭವದಿಂದ ನಡೆಯಿತು. ಎಲ್ಲರ ಮನೆಗಳಲ್ಲಿ ಲಕ್ಷ್ಮೀ ಪೂಜೆ ಕಳೆಗಟ್ಟಿತ್ತು. ಪೂಜೆಗಾಗಿ ಮನೆಯಲ್ಲಿ ಕಬ್ಬು, ಬಾಳೆ ಕಂಬ, ತಳಿರು ತೋರಣ ಕಟ್ಟಿ ವಿವಿಧ ಹೂ, ಆಭರಣಗಳಿಂದ ಲಕ್ಷ್ಮೀಯನ್ನು ಸಿಂಗರಿಸಲಾಗಿತ್ತು. ಮುತ್ತೈದೆಯರನ್ನು ಕರೆದು ಉಡಿ ತುಂಬಿ, ಲಕ್ಷ್ಮೀ ದೇವಿಯ ಭಕ್ತಿಯ ಹಾಡುಗಳನ್ನು ಹಾಡುವುದರ ಮೂಲಕ ಪೂಜೆಗೈದರು. ಪ್ರತಿ ಮನೆಯ ಮುಂದೆ ಮಣ್ಣಿನ ಹಣತೆ ಬೆಳಗಿಸಿದ್ದು ಬೆಳಕಿನ ಹಬ್ಬದ ಸಂಭ್ರಮಕ್ಕೆ ಸಾಕ್ಷಿಯಾಗಿತ್ತು.

ಸಂಜೆ ಅಮವಾಸ್ಯೆ ವಾಹನಪೂಜೆ, ಅಂಗಡಿ ಮುಂಗಟ್ಟುಗಲ್ಲಿ ಧನಲಕ್ಷ್ಮೀ ಪೂಜೆ ಸಲ್ಲಿಸಿದರು. ರೈತರು ತಮ್ಮ ಕೃಷಿ ಉಪಕರಣ, ಟ್ರ್ಯಾಕ್ಟರ್, ಬೈಕ್, ಕಾರು ಇತರೆ ವಾಹನಗಳಿಗೆ ತಳಿರು–ತೋರಣ ಕಟ್ಟಿ ನೆರೆ–ಹೊರೆಯವರನ್ನು ಕರೆದು ಮುತ್ತೈದೆಯರಿಗೆ ಉಡಿ ತುಂಬಿ ಪೂಜೆ ಸಲ್ಲಿಸಿದರು. ಬಹುತೇಕರು ಪಾಡ್ಯ ಪೂಜೆಗೆ ಪೆಂಡಾಲ್ ಹಾಕಿಸುವ, ತಳಿರು–ತೋರಣ ಕಟ್ಟುವ, ವಿದ್ಯುತ್ ದೀಪಗಳ ಅಲಂಕಾರದ ಸಿದ್ಧತೆ ಮಾಡಿಕೊಂಡರು.

ಹಬ್ಬದ ಹಿನ್ನೆಲೆಯಲ್ಲಿ ಮಂಗಳವಾರವೂ ವ್ಯಾಪಾರ–ವಹಿವಾಟು ಜೋರಾಗಿಯೇ ನಡೆಯಿತು. ಮುಂಗಾರಿನ ಹಸಿ ಬರದ ನಡುವೆಯೂ ದೀಪಾವಳಿ ಹಬ್ಬದ ಸಡಗರಕ್ಕೇನೂ ಕಮ್ಮಿಯಿಲ್ಲ ಎನ್ನುವಂತಹ ಹಬ್ಬದ ವಾತಾವರಣ ಮನೆ ಮಾಡಿತ್ತು.



## ‘ಗಾಝಾದಲ್ಲಿ ಪ್ರತಿದಿನವೂ ದೀಪಾವಳಿ’: ನರಮೇಧವನ್ನು ಸಂಭ್ರಮಿಸಿ ವಿಕೃತಿ ಮೆರೆದ ರಾಮ್ ಗೋಪಾಲ್ ವರ್ಮಾ

**■ ವಿಜಯಸಾಕ್ಷಿ ಸುದ್ದಿ, ಹೈದರಾಬಾದ್**

“ಭಾರತದಲ್ಲಿ ಕೇವಲ ಒಂದು ದಿನ ಮಾತ್ರ ದೀಪಾವಳಿ, ಗಾಝಾದಲ್ಲಿ ಪ್ರತಿದಿನವೂ ದೀಪಾವಳಿ” ಎಂದು ನಿರ್ದೇಶಕ ರಾಮ್‌ಗೋಪಾಲ್ ವರ್ಮಾ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸೋಮವಾರ (ಅ.20) ಪೋಸ್ಟ್ ಹಾಕಿದ್ದು, ಈ ಮೂಲಕ ಗಾಝಾ ನರಮೇಧವನ್ನು ಸಂಭ್ರಮಿಸಿ ವಿಕೃತಿ ಮೆರೆದಿದ್ದಾರೆ.

ವರ್ಮಾ ಅವರ ಈ ವಿಕೃತ ಪೋಸ್ಟ್‌ಗೆ ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಪ್ರಶಸ್ತಿ ವಿಜೇತ ಪತ್ರಕರ್ತೆ ರಾಣಾ ಅಯ್ಯೂಬ್ ವರ್ಮಾ ಅವರ ಪೋಸ್ಟ್ ಅನ್ನು ರೀಪೋಸ್ಟ್ ಮಾಡಿದ್ದು, “ಪುನರುಚ್ಚರಿಸುತ್ತಿದ್ದೇನೆ: ನೈತಿಕವಾಗಿ ಭ್ರಷ್ಟಗೊಂಡಿರುವ ರಾಷ್ಟ್ರದಲ್ಲಿ ವೈರಸ್‌ಗೆ ಕೊಲ್ಲಲು ಏನು ಉಳಿದಿದೆ?” ಬರೆದುಕೊಂಡಿದ್ದಾರೆ.

“ಭಾರತದ ಹೊರಗಿನ ಜನರು ಭಾರತದಲ್ಲಿ ಮುಖ್ಯವಾಹಿನಿಯಲ್ಲಿರುವ ಮತ್ತು ಭಾರತೀಯ ಸೆಲೆಬ್ರಿಟಿಗಳು ಹೆಚ್ಚು ಪ್ರತಿಪಾದಿಸುವ ರಾಜಕೀಯದ ಕೀಳು ಮಟ್ಟವನ್ನು ಗ್ರಹಿಸಿಲೂ ಸಾಧ್ಯವಿಲ್ಲ” ಎಂದು ಪತ್ರಕರ್ತೆ ಮತ್ತು ಅಂಕಣಗಾರ್ತಿ ಸಾರಾ ಅಥರ್ ಆಕ್ರೋಶ ಹೊರ ಹಾಕಿದ್ದಾರೆ.

## ನಮಾಜ್ ನಂತರ ಗೋಮೂತ್ರದಿಂದ ‘ಶುದ್ಧೀಕರಿಸಿದ ಬಿಜೆಪಿ ಸಂಸದೆ; ಕ್ರಮಕ್ಕೆ ಶಿವಸೇನೆ ಆಗ್ರಹ

**■ ವಿಜಯಸಾಕ್ಷಿ ಸುದ್ದಿ, ಪುಣೆ**

ಪುಣೆ ನಗರದ ಐತಿಹಾಸಿಕ ಶನಿವಾರ್ ವಾಡಾ ಕೋಟೆಯಲ್ಲಿ ಮೂವರು ಮಹಿಳೆಯರು ನಮಾಜ್ ಮಾಡಿದ ನಂತರ ಪುಣೆಯಲ್ಲಿ ಭಾರಿ ವಿವಾದ ಭುಗಿಲೆದ್ದಿದೆ. ಭಾರತೀಯ ಜನತಾ ಪಕ್ಷದ (ಬಿಜೆಪಿ) ಸಂಸದೆಯೊಬ್ಬರು ಗೋಮೂತ್ರದಿಂದ ನಮಾಜ್ ಮಾಡಿದ ಪ್ರದೇಶವನ್ನು ‘ಶುದ್ಧೀಕರಿಸುತ್ತಿದ್ದಾರೆ’ ಎಂದು ಕಂಡುಬಂದಿದೆ.

ಘಟನೆ ಶನಿವಾರ ನಡೆದಿರುವುದಾಗಿ ವರದಿಯಾಗಿದೆ, ನಂತರ ಬಿಜೆಪಿ ಸಂಸದೆ ಮೇಧಾ ಕುಲಕರ್ಣಿ, ಕೆಲವು ಪಕ್ಷದ ಕಾರ್ಯಕರ್ತರೊಂದಿಗೆ ಸ್ಥಳಕ್ಕೆ ಹೋಗಿ ಸ್ಥಳವನ್ನು ಶುದ್ಧೀಕರಿಸಿದ್ದಾರೆ.

ಕುಲಕರ್ಣಿ ತಮ್ಮ ಕ್ರಮಗಳನ್ನು ಸಮರ್ಥಿಸಿಕೊಂಡಿದ್ದಾರೆ, “ಶನಿವಾರ್ ವಾಡಾದಂತಹ ಸ್ಥಳದಲ್ಲಿ ಮುಸ್ಲಿಮರು ನಮಾಜ್ ಮಾಡಲು ಅವಕಾಶ ನೀಡಬಾರದು” ಎಂದು ಹೇಳುವ ಮೂಲಕ ಮಹಿಳೆಯರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ. “ಇದು ದುರದೃಷ್ಟಕರ; ಶನಿವಾರ್ ವಾಡಾ ನಮಾಜ್ ಮಾಡಲು ಸೂಕ್ತ ಸ್ಥಳವಲ್ಲ. ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ನಾವು ಆಡಳಿತವನ್ನು ಒತ್ತಾಯಿಸುತ್ತೇವೆ” ಎಂದು ಕುಲಕರ್ಣಿ ಹೇಳಿದ್ದಾರೆ.

# ಸಾಮೂಹಿಕ ವಿವಾಹಗಳ ಮೇಲೆ ನಿಗಾ ಇರಲಿ

▶▶ ಮೊದಲನೇ ಪುಟದಿಂದ

ಸಮಿತಿ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮತ್ತು ಸಿಬ್ಬಂದಿ, ಸಾಮೂಹಿಕ ವಿವಾಹಗಳು ನಡೆಯುವ ಕಡೆ ಒಂದು ದಿನ ಮುಂಚಿತವಾಗಿಯೇ ಹೋಗಬೇಕು. ಪೊಲೀಸರ ನೆರವು ಪಡೆದು ವಿಡಿಯೋ ಚಿತ್ರೀಕರಣದ ಮೂಲಕ ಪರಿಶೀಲನೆ ನಡೆಸಿ, ಬಾಲ್ಯವಿವಾಹ ನಡೆಯದಂತೆ ನೋಡಿಕೊಳ್ಳಬೇಕು ಎಂದರು. ಮುಂದಿನ ದಿನಗಳಲ್ಲಿ ಸಾಮೂಹಿಕ ವಿವಾಹ ನಡೆಸುವ ಸಂಘ–ಸಂಸ್ಥೆಗಳು, ಆಯೋಜಕರು ಕಡ್ಡಾಯವಾಗಿ ಮಕ್ಕಳ ರಕ್ಷಣಾ ಘಟಕದಿಂದ ನಿರಪೇಕ್ಷಣಾ ಪತ್ರ ಪಡೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಸೂಕ್ತ ಮಾರ್ಗಸೂಚಿಯನ್ನು ಪ್ರಕಟಿಸಲಿದ್ದು, ಅಧಿಕಾರಿಗಳು ಅದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದರು.

ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಾತನಾಡಿ, ಅಪರಾಧ ಚಟುವಟಿಕೆಯಲ್ಲಿ ತೊಡಗಿದ 18 ವರ್ಷದೊಳಗಿನ ಮಕ್ಕಳನ್ನು ಬಾಲ ನ್ಯಾಯ ಮಂಡಳಿ ಎದುರು ಹಾಜರುಪಡಿಸಿ, ಅವರಿಗೆ ಸೂಕ್ತ ತಿಳಿವಳಿಕೆ ನೀಡುವ ಕೆಲಸವನ್ನು ಬಾಲ ನ್ಯಾಯ ಮಂಡಳಿ ಮಾಡಲಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶ್ರೀಧರ ಸಿ.ಎನ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸುರೇಶ ಕಟ್ಟಿಮನಿ, ಪ್ರಭು ಬುರಬುರೆ, ಎಸ್.ಎನ್. ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಪಟ್ಟಣದಲ್ಲಿ ಸಂಭ್ರಮದ ದೀಪಾವಳಿ ಆಚರಣೆ । ಅಮವಾಸ್ಯೆ ದಿನ ಖರೀದಿ ಜೋರು**

# ಝಗಮಗಿಸಿದ ವಿದ್ಯುತ್ ದೀಪಗಳು



ಕಳೆದ ಬಾರಿಗಿಂತ ಈ ಬಾರಿ ವ್ಯಾಪಾರ ಅಷ್ಟೇನೂ ಜೋರಾಗಿಲ್ಲ. ರೈತರು ಈ ಬಾರಿ ನಷ್ಟ ಅನುಭವಿಸಿದ್ದಾರೆ. 500 ರೂ ಖರ್ಚು ಮಾಡುತ್ತಿದ್ದ ರೈತ ಈಗ 300 ರೂ ಖರ್ಚಿನಲ್ಲಿಯೇ ಹಬ್ಬ ಮಾಡುತ್ತಿದ್ದಾನೆ. ಇದರಿಂದ ವ್ಯಾಪಾರ ಸ್ವಲ್ಪ ಮಟ್ಟಿಗೆ ಕುಂಠಿತಗೊಂಡಿದೆ.

**– ಬಸವರಾಜ.**
ಹೂ–ಹಣ್ಣು ವ್ಯಾಪಾರಿ.

**■ ವಿಜಯಸಾಕ್ಷಿ ಸುದ್ದಿ, ರೋಣ**

ಈ ಬಾರಿ ಮುಂಗಾರು ಬೆಳೆಗಳು ಕೈಕೊಟ್ಟರೂ ಸಹ ಬೆಳಕಿನ ಹಬ್ಬ ದೀಪಾವಳಿನ್ನು ತಾಲೂಕಿನಾದ್ಯಾಂತ ಸಂಭ್ರಮ ಹಾಗೂ ಸಡಗರಿಂದ ಆಚರಿಸಿದರು. ದೀಪಾವಳಿ ಅಮವಾಸ್ಯೆ ದಿನದಂದು ಹಬ್ಬದ ಖರೀದಿ ಜೋರಾಗಿತ್ತು. ವ್ಯಾಪಾರ ಮಳಿಗೆಗಳು ವಿದ್ಯುತ್ ದೀಪಗಳಿಂದ ಅಲಂಕೃತಗೊಂಡು ಹಬ್ಬಕ್ಕೆ ಮತ್ತಷ್ಟು ಮೆರುಗನ್ನು ನೀಡಿದ್ದವು.


ಹಬ್ಬದ ನಿಮಿತ್ತ ಸಾರ್ವಜನಿಕರು ತಮ್ಮ ಮನೆಗಳಿಗೆ ಸುಣ್ಣ–ಬಣ್ಣಗಳಿಂದ, ವಿದ್ಯುತ್ ದೀಪಗಳಿಂದ ಅಲಂಕರಿಸಿ, ಮನೆಗಳ ಮುಂದೆ ಹಣತೆಗಳನ್ನು ಹಚ್ಚಿ ಹಬ್ಬ ಆಚರಿಸಿದರು. ದೀಪಾವಳಿ ಅಮವಾಸ್ಯೆಯಂದು ಧನಲಕ್ಷ್ಮೀ ಪೂಜೆ ಮಾಡುವುದರಿಂದ ಹೂ–ಹಣ್ಣುಗಳಿಗೆ ಬೇಡಿಕೆ ಹೆಚ್ಚಿತ್ತು. ವ್ಯಾಪಾರಸ್ಥರು ತಮ್ಮ ಅಂಗಡಿಗಳಲ್ಲಿ ಧನಲಕ್ಷ್ಮೀ ಪೂಜೆಗೆ ಅಲಂಕೃತ ಮಂಟಪಗಳನ್ನು ನಿರ್ಮಿಸಿ, ಲಕ್ಷ್ಮೀದೇವಿಯನ್ನು ಪೂಜಿಸಿದರು.

ಉತ್ತರ ಕರ್ನಾಟಕದಲ್ಲಿ ಎಲ್ಲ ಹಬ್ಬಗಳನ್ನು ಎಲ್ಲರೂ ಸೇರಿಕೊಂಡು ಆಚರಣೆ ಮಾಡುವುದು ವಾಡಿಕೆ. ಅಂತೆಯೇ, ದೀಪಾವಳಿ ಹಬ್ಬದಲ್ಲಿ ಮುಸ್ಲಿಂ ವ್ಯಾಪಾರಸ್ಥರು ಸಹ ತಮ್ಮ ಅಂಗಡಿಗಳಲ್ಲಿ ಧನಲಕ್ಷ್ಮೀ ಪೂಜೆಯನ್ನು ನೆರವೇರಿಸುವ ಮೂಲಕ ಏಕತೆಯನ್ನು ಸಾರುತ್ತಾರೆ. ಬೆಳಕಿನ ಹಬ್ಬ ದೀಪಾವಳಿ ಸಮಸ್ತ ಜನಾಂಗದವರ ಹಬ್ಬವಾಗಿ ಆಚರಿಸಲ್ಪಡುತ್ತದೆ.

ಕಳೆದ ಬಾರಿಗಿಂತ ಈ ಬಾರಿ ಮಣ್ಣಿನ ಹಣತೆಗಳಿಗೆ ಬೇಡಿಕೆ ಹೆಚ್ಚಾಗಿತ್ತು. ಪಟ್ಟಣದ ಸಂತೆ ಬಜಾರ್ ಸೇರಿದಂತೆ ಜಕ್ಕಲಿ ಕ್ರಾಸ್, ಮುಲ್ಲಾನಭಾವಿ, ಕೆನರಾ ಬ್ಯಾಂಕ್ ಬಳಿ, ಸೂಡಿ ಕ್ರಾಸ್, ಪೋತರಾಜನ ಕಟ್ಟೆ ಬಳಿ ಮಣ್ಣಿನಿಂದ ತಯಾರಿಸಿದ ಹಣತೆಗಳು ಬಿಕರಿಯಾದವು.

ಅತಿಯಾದ ಮಳೆಯಿಂದ ಮುಂಗಾರು ಬೆಳೆಗಳು ಸಂಪೂರ್ಣ ಕೈಕೊಟ್ಟವು. ಆದರೂ ಹಬ್ಬ ಮಾಡಬೇಕು. ದೀಪಾವಳಿ ಹಬ್ಬ ಅತ್ಯಂತ ಮಹತ್ವದ ಹಬ್ಬ. ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದರೂ ಹಬ್ಬವನ್ನು ಸಂಪ್ರದಾಯದಂತೆ ಆಚರಿಸಲೇಬೇಕಿದೆ ಎಂದು ರೈತರಾದ ರುದ್ರಪ್ಪ ಹಲಗೇರಿ ಅಭಿಪ್ರಾಯ ಹಂಚಿಕೊಂಡರು.

## ನಕಲಿ ಅಂಚೆ ಚೀಟಿಗಳ ಜಾಲ ಪತ್ತೆಹಚ್ಚಿದ ಪೊಲೀಸರು; ಮುಂಬೈನಲ್ಲಿ ಮೂವರ ಬಂಧನ



**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೆಹಲಿ ಮತ್ತು ಬಿಹಾರದಿಂದ ದೇಶಾದ್ಯಂತ ನಡೆಸಲಾಗುತ್ತಿದ್ದ 8 ಕೋಟಿ ರೂಪಾಯಿ ಮೌಲ್ಯದ ನಕಲಿ ಅಂಚೆ ಚೀಟಿಗಳ ಜಾಲಕ್ಕೆ ಸಂಬಂಧಿಸಿದಂತೆ ಮುಂಬೈನಲ್ಲಿ ಮೂವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆರೋಪಿಗಳನ್ನು ಉದ್ಯಮಿಗಳಾದ ರಾಕೇಶ್ ಬಿಂದ್, ಶಂಸುದ್ದೀನ್ ಅಹ್ಮದ್ ಮತ್ತು ಗುಮಾಸ್ತ ಶಾಹಿದ್ ರಜಾ ಎಂದು ಗುರುತಿಸಲಾಗಿದೆ. ಅವರನ್ನು ಗುರುವಾರದವರೆಗೆ ಪೊಲೀಸ್ ಕಸ್ಟಡಿಗೆ ಕಳುಹಿಸಲಾಗಿದೆ.

ಮುಂಬೈ ಪೊಲೀಸರ ಪ್ರಕಾರ, ಆರೋಪಿಗಳು ಅರ್ಧದಷ್ಟು ಮುಖಬೆಲೆಗೆ ನಕಲಿ ಅಂಚೆ ಚೀಟಿಗಳನ್ನು ಮಾರಾಟ ಮಾಡಿದ್ದಾರೆ. ಮೂವರೊಂದಿಗೆ ಸಂಪರ್ಕ ಹೊಂದಿದ ಬ್ಯಾಂಕ್ ದಾಖಲೆಗಳು 8 ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ವಹಿವಾಟುಗಳನ್ನು ತೋರಿಸುತ್ತವೆ ಎಂದು ವರದಿಯಾಗಿದೆ.

ಅಂಚೆ ಪತ್ರಗಳನ್ನು ಪರಿಶೀಲಿಸುವಾಗ ಇಲಾಖೆಯ ಅಧಿಕಾರಿಗಳು ಹಗರಣವನ್ನು ಕಂಡುಹಿಡಿದ್ದಾರೆ. ಅವುಗಳ ಮೇಲೆ ಅಂಟಿಸಲಾದ ಅಂಚೆ ಚೀಟಿಗಳು ನಕಲಿ ಎಂದು ಕಂಡುಬಂದಿದೆ.




# ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರವಿವಾರ ನಗರಸಭೆಯ ಶೇ. 18, ಎಸ್‌ಎಫ್‌ಸಿ ಶೇ. 15 ಹಾಗೂ ನಗರಸಭೆಯ ಅನುದಾನದಡಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಿಸಿದರು.



ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೇರಿದಂತೆ ಇತರರಿದ್ದರು.










VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka